Web

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಸ್ಥಾಪಿಸುವ ಬಗ್ಗೆ.

**ಓದಲಾಗಿದೆ:**

1. ಕರ್ನಾಟಕ ಗ್ರಾಮಸ್ವರಾಜ್ ಮತ್ತು ಪಂಚಾಯತ್‌ರಾಜ್ ಅಧಿನಿಯಮ 1993 ರ ಪ್ರಕರಣ 232-ಎ.
2. ಕರ್ನಾಟಕ ರಾಜ್ಯದ 2020-21ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 146.

**ಪ್ರಸ್ತಾವನೆ:**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ರಾಜ್ಯಾದ್ಯಂತ ಕಾರ್ಯಕ್ಷೇತ್ರವನ್ನು ಹೊಂದಿದ್ದು, ಗ್ರಾಮೀಣ ಜನತೆಯ ಶ್ರೇಯೋಭಿವೃದ್ಧಿಗೆ ಹಾಗೂ ಮೂಲ ಸೌಕರ್ಯಗಳನ್ನು ಒದಗಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳು/ಕಾರ್ಯಕ್ರಮಗಳ ಅನುಷ್ಠಾನದ ಜವಾಬ್ದಾರಿ ನಿರ್ವಹಿಸುತ್ತಿದೆ. ಸಂವಿಧಾನದ 73ನೇ ತಿದ್ದುಪಡಿ ಅನುಸಾರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರಡಿ 30 ಜಿಲ್ಲಾ ಪಂಚಾಯಿತಿಗಳು, 226 ತಾಲ್ಲೂಕು ಪಂಚಾಯಿತಿಗಳು ಹಾಗೂ 6012 ಗ್ರಾಮ ಪಂಚಾಯಿತಿಗಳು ಅಸ್ತಿತ್ವದಲ್ಲಿದ್ದು, ಅಧಿಕಾರ ವಿಕೇಂದ್ರೀಕರಣ ನೀತಿಯಿಂದಾಗಿ ವಿವಿಧ ಇಲಾಖೆಗಳ 29 ವಿಷಯಗಳನ್ನು ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ವರ್ಗಾಯಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣ 232-ಎ ರಲ್ಲಿ ಪಂಚಾಯತ್ ರಾಜ್ ಆಯುಕ್ತಾಲಯ ಸ್ಥಾಪನೆ ಬಗ್ಗೆ ಇರುವ ಉಪಬಂಧದಲ್ಲಿ ರಾಜ್ಯದಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳು ಸುಗಮವಾಗಿ ಕಾರ್ಯನಿರ್ವಹಿಸಲು ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಪ್ರತ್ಯೇಕವಾಗಿ ಪಂಚಾಯತ್ ರಾಜ್ ಸೇವೆಗಳಿಗೆಂದೆ ಸರ್ಕಾರವು ಆಯುಕ್ತಾಲಯ ಸ್ಥಾಪಿಸತಕ್ಕದ್ದು. ಅದರ ಅಧಿಕಾರಗಳು, ಪ್ರಕಾರ್ಯಗಳು ಮತ್ತು ಕರ್ತವ್ಯಗಳು ಹಾಗೂ ಹುದ್ದೆಗಳ ಪ್ರವರ್ಗಗಳ ಸಂಖ್ಯೆ, ನೇಮಕಾತಿ ವಿಧಾನ, ಕನಿಷ್ಠ ಅರ್ಹತೆ ಇವುಗಳು ನಿಯಮಿಸಬಹುದಾದಂತೆ ಇರತಕ್ಕದ್ದು ಎಂದಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ 2020-21ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅಧಿಕಾರ ವಿಕೇಂದ್ರಿಕರಣ ಮಾಡುವುದರಲ್ಲಿ ಕರ್ನಾಟಕ ರಾಜ್ಯವು ದೇಶದಲ್ಲಿಯೇ ಮಾದರಿ ರಾಜ್ಯವಾಗಿರುತ್ತದೆಂದೂ, ವಿಕೇಂದ್ರಿಕರಣ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು 2020-21ನೇ ಸಾಲಿನಿಂದ ಪಂಚಾಯತ್ ರಾಜ್ ಆಯುಕ್ತಾಲಯ ಸ್ಥಾಪಿಸಲಾಗುವುದು ಎಂದು ಘೋಷಿಸಿರುತ್ತಾರೆ.

ರಾಜ್ಯದ ಜಿಲ್ಲಾ ಪಂಚಾಯಿತಿಗಳು, ತಾಲ್ಲೂಕು ಪಂಚಾಯಿತಿಗಳು ಹಾಗೂ ಗ್ರಾಮ ಪಂಚಾಯಿತಿಗಳು ಸ್ಥಳೀಯ ಸ್ವಯಂ ಸರ್ಕಾರದಂತೆ ಕಾರ್ಯನಿರ್ವಹಿಸಲು ಅವಶ್ಯವಿರುವ ಸಂಪನ್ಮೂಲ ಸಂಗ್ರಹ, ಸಿಬ್ಬಂದಿ ವ್ಯವಸ್ಥೆ ಮತ್ತು ಯೋಜನೆಗಳ ಅನುಷ್ಠಾನದ ಮೂಲಕ ಗ್ರಾಮೀಣ ಜನರ ಜೀವನ ಮಟ್ಟವನ್ನು ಸುಧಾರಿಸಲು ಅವಶ್ಯವಿರುವ ಬೆಂಬಲ, ಮೇಲ್ವಿಚಾರಣೆ ಮತ್ತು ಪರಿವೀಕ್ಷಣೆ ಮಾಡಲು ಒಟ್ಟಾರೆ ಪಂಚಾಯತ್ ರಾಜ್ ಕಾಯಿದೆಯ ಆಶಯಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು, ಪ್ರತ್ಯೇಕ ಆಯುಕ್ತಾಲಯ ಸ್ಥಾಪನೆಯಿಂದ ಅನುಕೂಲವಾಗಲಿದೆ.

ಈ ಹಿನ್ನೆಲೆಯಲ್ಲಿ, ರಾಜ್ಯ ಮಟ್ಟದಲ್ಲಿ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯವನ್ನು ಸ್ಥಾಪಿಸಲು ಹಾಗೂ JAG ಗಿಂತ ಕಡಿಮೆ ಇಲ್ಲದ ಐ.ಎ.ಎಸ್. ದರ್ಜೆಯ ಆಯುಕ್ತರ ಹುದ್ದೆಯನ್ನು ವೇತನ ಶ್ರೇಣಿ ರೂ.78800–209200 ರಲ್ಲಿ ಸೃಜಿಸಲು ಸರ್ಕಾರವು ನಿರ್ಧರಿಸಿದೆ.

ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : RDPR 52 GPS 2020**
**ಬೆಂಗಳೂರು, ದಿನಾಂಕ: 07–05–2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯ ಮಟ್ಟದಲ್ಲಿ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸ್ಥಾಪಿಸಿದೆ.

ಆಯಕ್ತಾಲಯಕ್ಕೆ JAG ಗಿಂತ ಕಡಿಮೆ ಇಲ್ಲದ ಐ.ಎ.ಎಸ್. ದರ್ಜೆಯ ಆಯುಕ್ತರ ಹುದ್ದೆಯನ್ನು ವೇತನ ಶ್ರೇಣಿ ರೂ.78800–209200 ರಲ್ಲಿ ಸೃಜಿಸಿ ಆದೇಶಿಸಿದೆ.

ನೂತನ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸೇರಿದ ಬೆಂಗಳೂರಿನ ಕೆಂಪೇಗೌಡ ರಸ್ತೆಯಲ್ಲಿರುವ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತಿ ಹಳೆಯ ಕಟ್ಟಡದಲ್ಲಿ ಕಾರ್ಯನಿರ್ವಹಿಸಲು ಆದೇಶಿಸಿದೆ.

ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ರಚನೆ, ಕಾರ್ಯಹಂಚಿಕೆ, ಹುದ್ದೆಗಳ ವಿವರ, ನೇಮಕಾತಿ ವಿಧಾನಗಳ ಬಗ್ಗೆ ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದು.

ಈ ಆದೇಶವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಕ್ರಮವಾಗಿ ಟಿಪ್ಪಣಿ ಸಂಖ್ಯೆ: RDPR 52 GPS 2020(ಭಾ–1) ರ ಕಂಡಿಕೆ 6 ರಲ್ಲಿ ದಿನಾಂಕ: 30–01–2020 ಮತ್ತು FD 35 Exp-6/2020 (e office) dated:06-05-2020 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಉಮಾ ಮಹಾದೇವನ್

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
7/5/2020

**ಇವರಿಗೆ,**

1) ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು–560001 ಇವರಿಗೆ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು;
2) ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು.

3) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6) ಅಭಿವೃದ್ಧಿ ಆಯುಕ್ತರು ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7) ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
8) ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು.
9) ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಕಲಬುರ್ಗಿ ಮತ್ತು ಬೆಳಗಾವಿ ವಿಭಾಗಗಳು.
10) ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
11) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿವಾಹಕ ಅಧಿಕಾರಿಗಳು.
12) ವ್ಯವಸ್ಥಾಪಕ ನಿರ್ದೇಶಕರು, ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಬೆಂಗಳೂರು.
13) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
14) ನಿರ್ದೇಶಕರು, ಎನ್.ಐ.ಸಿ, ಬೆಂಗಳೂರು.
15) ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು.
16) ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ.
17) ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು..
18) ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
19) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು.
20) ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.

<u>ಪ್ರತಿ:</u>

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3. ಎಲ್ಲಾ ಆಯುಕ್ತರು / ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಉಪ ಕಾರ್ಯದರ್ಶಿ (ಆಡಳಿತ-1/ಆಡಳಿತ-2) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ನಿರ್ದೇಶಕರು (ಪಂ.ರಾಜ್-1/2) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
7. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.